# ಕರ್ನಾಟಕ ವಿಧಾನ ಪರಿಷತ್ತು

ಸದಸ್ಯರ ಹೆಸರು : ಶ್ರೀ ನಸೀರ್ ಅಹ್ಮದ್ (ವಿಧಾನಸಭೆಯಿಂದ ಚುನಾಯಿತರಾದವರು)

ಚುಕ್ಕೆ ರಹಿತ ಪ್ರಶ್ನೆ ಸಂಖ್ಯೆ : **664**

ಉತ್ತರ ದಿನಾಂಕ : 17.12.2021

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಮಂಡ್ಯ ಜಿಲ್ಲೆ ಪಾಂಡವಪುರ ತಾಲ್ಲೂಕು ಮೇಲುಕೋಟೆ ಹೋಬಳಿಯ ಕಾಡೇನಹಳ್ಳಿ ಗ್ರಾಮಕ್ಕೆ ಶುದ್ಧ ಕುಡಿಯುವ ನೀರಿನ ಘಟಕವನ್ನು ನಿರ್ಮಿಸಿರುವುದು ನಿಜವೇ, ಹಾಗಿದ್ದಲ್ಲಿ ಘಟಕವು ಯಾವ ದಿನಾಂಕದಿA ದ ಪ್ರಾರಂಭವಾಗಿರುತ್ತದೆ; (ಸಂಪೂರ್ಣ ಮಾಹಿತಿ ನೀಡುವುದು) | ಮಂಡ್ಯ ಜಿಲ್ಲೆ ಪಾಂಡವಪುರ ತಾಲ್ಲೂಕು ಮೇಲುಕೋಟೆ ಹೋಬಳಿಯ ಕಾಡೇನಹಳ್ಳಿ ಗ್ರಾಮದಲ್ಲಿ ಶುದ್ದ ಕುಡಿಯುವ ನೀರಿನ ಘಟಕವನ್ನು ನಿರ್ಮಿಸಲಾಗಿದ್ದು, ಮಾರ್ಚ್-2018 ರಿಂದ ಪ್ರಾರಂಭವಾಗಿರುತ್ತದೆ. |
| ಆ) | ಶುದ್ಧ ಕುಡಿಯುವ ನೀರಿನ ಘಟಕವನ್ನು ನಿರ್ಮಿಸಿ 3 ವರ್ಷವಾಗಿದ್ದರೂ ಸಹ ಇನ್ನೂ ನೀರಿನ ಘಟಕವನ್ನು ಚಾಲನೆ ಮಾಡದಿರುವುದಕ್ಕೆ ಕಾರಣವೇನು; (ಸಂಪೂರ್ಣ ಮಾಹಿತಿ ನೀಡುವುದು) | ಶುದ್ಧ ಕುಡಿಯುವ ನೀರಿನ ಘಟಕವನ್ನು ಮಾರ್ಚ್-2018 ರಲ್ಲಿ ನಿರ್ಮಿಸಿದ ದಿನದಿಂದಲೇ ಚಾಲನೆಗೊಳಿಸಲಾಗಿರುತ್ತದೆ ಮತ್ತು ಪ್ರಸ್ತುತ ಸುಸ್ಥಿತಿಯಲ್ಲಿರುತ್ತದೆ. |
| ಇ) | ಶುದ್ಧ ಕುಡಿಯುವ ನೀರಿನ ಘಟಕವನ್ನು ನೋಡಿಕೊಳ್ಳುವ ಉಸ್ತುವಾರಿಯನ್ನು ಯಾರಿಗೆ ನೀಡಲಾಗಿದೆ; ಹಾಗೂ ಘಟಕವು ಸಂಪೂರ್ಣ ಹಾಳಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗೂ ಬಂದಿದ್ದಲ್ಲಿ ತಪ್ಪಿತಸ್ಥರ ವಿರುದ್ಧ ಯಾವ ಕ್ರಮ ಕೈಗೊಳ್ಳಲಾಗಿದೆ; | ಶುದ್ದ ಕುಡಿಯುವ ನೀರಿನ ಘಟಕವನ್ನು ಪ್ರಸ್ತುತ ಶ್ರೀ ಬೆಳ್ಳಿ ಬೆಟ್ಟು ಹೆಂಜಾರೆಡ್ಡಿ ಕೃಷ್ಣಾರೆಡ್ಡಿರವರಿಂದ ಕಾರ್ಯಚರಣೆ ಮತ್ತು ನಿರ್ವಹಣೆ ಮಾಡಲಾಗುತ್ತಿದ್ದು, ಪ್ರಸ್ತುತ ಸುಸ್ಥಿತಿಯಲ್ಲಿರುತ್ತದೆ. ಜುಲೈ-2019 ರಲ್ಲಿ ಸಿಡಿಲು ಬಡಿದು ಮೋಟಾರ್ ಮತ್ತು ಕಾಯಿನ್ ಬಾಕ್ಸ್ ಹಾಳಾಗಿದ್ದು ದುರಸ್ಥಿಪಡಿಸಿ ಘಟಕವನ್ನು ಚಾಲನೆಗೊಳಿಸಲಾಗಿರುತ್ತದೆ. ಘಟಕವು ಸಂಪೂರ್ಣವಾಗಿ ಹಾಳಾಗಿರುವುದಿಲ್ಲ. |
| ಈ) | ಶುದ್ಧ ಕುಡಿಯುವ ನೀರಿಗಾಗಿ ಕಾಡೇನಹಳ್ಳಿಯಿಂದ ಕದಲಗೆರೆ ಹೂಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ, ಯಾವಾಗ ಪ್ರಾರಂಭಿಸಲಾಗುವುದು? (ಸಂಪೂರ್ಣ ಮಾಹಿತಿ ನೀಡುವುದು) | ಸದ್ಯದ ಪರಿಸ್ಥಿತಿಯಲ್ಲಿ ಸದರಿ ಘಟಕವು ಚಾಲನೆಯಲ್ಲಿದ್ದು ಜನರು ಶುದ್ಧ ಕುಡಿಯುವ ನೀರನ್ನು ಈ ಘಟಕದಿಂದಲೇ ತೆಗೆದುಕೊಳ್ಳುತ್ತಿದ್ದಾರೆ. |

ಸಂ:ಗ್ರಾಕುನೀ&ನೈಇ 311 ಗ್ರಾನೀಸ(4)2021

(ಕೆ.ಎಸ್. ಈಶ್ವರಪ್ಪ)

ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್

ಸಚಿವರು